The date for paying the supplementary fees has been extended from 02/08/2022 to 04/08/2022- Those students who have failed in the declared result of Re-Evaluation and Re-Totaling (prescribed examination fee along with previous penalty fee)

ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ, ಬೆಂಗಳೂರು-560012

ಸಂಖ್ಯೆ: ಪಪೂಶಿಇ/ಪರೀಕ್ಷೆ/ಮ.ಮೌ.ಅ.ವಿ.ಶು/2021-22

ದಿನಾಂಕ: 01.08.2022

## ಸುತ್ತೋಲೆ

ವಿಷಯ: ಮರುಮೌಲ್ಯಮಾಪನ ಮತ್ತು ಮರುಎಣಿಕೆ ಪ್ರಕ್ರಿಯೆಯಲ್ಲಿ ಅನುತ್ತೀರ್ಣರಾಗಿರುವ ವಿದ್ಯಾರ್ಥಿಗಳು ದ್ವಿತೀಯ ಪಿಯುಸಿ ಪೂರಕ ಪರೀಕ್ಷಾ ಶುಲ್ಕ ಪಾವತಿ ಮಾಡಲು ದಿನಾಂಕವನ್ನು ವಿಸ್ತರಿಸುವ ಕುರಿತು.

ಉಲ್ಲೇಖ: ಇಲಾಖಾ ಪತ್ರಿಕಾ ಪ್ರಕಟಣೆ ಸಂಖ್ಯೆ: ಪಪೂಶಿಇ/ಪರೀಕ್ಷೆ/ಪ.ಪ್ರ/2021-22 ದಿನಾಂಕ 31.07.2022

* * * *

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ ಏಪ್ರಿಲ್/ಮೇ 2022ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯ ಉತ್ತರಪತ್ರಿಕೆಗಳ ಮರುಮೌಲ್ಯಮಾಪನ ಮತ್ತು ಮರುಎಣಿಕೆ ಪ್ರಕ್ರಿಯೆಯ ಫಲಿತಾಂಶವನ್ನು ದಿನಾಂಕ 31.07.2022 ರಂದು ಪ್ರಕಟಿಸಲಾಗಿದೆ. ಪ್ರಕಟಿಸಿದ ಫಲಿತಾಂಶದಲ್ಲಿ ಅನುತ್ತೀರ್ಣರಾಗಿರುವ ವಿದ್ಯಾರ್ಥಿಗಳಿಗೆ ಮಾತ್ರ ಆಗಸ್ಟ್ 2022 ರಲ್ಲಿ ನಡೆಯಲಿರುವ ದ್ವಿತೀಯ ಪಿಯುಸಿ ಪೂರಕ ಪರೀಕ್ಷೆಗೆ ಈ ಹಿಂದಿನ ದಂಡ ಶುಲ್ಕದೊಂದಿಗೆ ನಿಗಧಿತ ಪರೀಕ್ಷಾ ಶುಲ್ಕವನ್ನು ಪಾವತಿಸಲು ದಿನಾಂಕ 02.08.2022 ರಿಂದ 04.08.2022 ರವರೆಗೆ ದಿನಾಂಕವನ್ನು ವಿಸ್ತರಿಸಿ ಆದೇಶಿಸಿದೆ.

ಪ್ರಾಂಶುಪಾಲರು ಪರೀಕ್ಷಾ ಶುಲ್ಕವನ್ನು ಪಾವತಿ ಮಾಡಿದ ವಿದ್ಯಾರ್ಥಿಗಳ ಮಾಹಿತಿಯನ್ನು ದಿನಾಂಕ 05.08.2022 ರೊಳಗೆ ಸ್ಯಾಟ್ಸ್ ತಂತ್ರಾಂಶದಲ್ಲಿ ಇಂದೀಕರಿಸುವುದು ಮತ್ತು ದಿನಾಂಕ 05.08.2022 ರಂದೇ K2 ಚಲನ್ ಮೂಲಕ ಖಜಾನೆಗೆ ಶುಲ್ಕ ಸಂದಾಯ ಮಾಡಿ ಅದೇ ದಿನದಂದು ವಿದ್ಯಾರ್ಥಿಗಳು ಪಾವತಿಸಿದ ಪರೀಕ್ಷಾ ಅರ್ಜಿಗಳು, ಚೆಕ್‌ಲಿಸ್ಟ್ ಮತ್ತು ಚಲನ್‌ಗಳನ್ನು ಆಯಾ ಜಿಲ್ಲಾ ಉಪನಿರ್ದೇಶಕರಿಗೆ ಸಲ್ಲಿಸಲು ತಿಳಿಸಿದೆ.

ಜಿಲ್ಲಾ ಉಪನಿರ್ದೇಶಕರು, ಪ್ರಾಂಶುಪಾಲರಿಂದ ಸ್ವೀಕರಿಸಿದ ಅರ್ಜಿಗಳನ್ನು ಸ್ಯಾಟ್ಸ್ ತಂತ್ರಾಂಶದಲ್ಲಿ ಇಂದೀಕರಿಸಿರುವುದನ್ನು ಖಾತ್ರಿಪಡಿಸಿಕೊಂಡು, ಚೆಕ್‌ಲಿಸ್ಟ್ ಪರಿಶೀಲಿಸಿ ಪ್ರಾಂಶುಪಾಲಗಳಿಂದ ಮುಚ್ಚಳಿಕೆ ಪತ್ರ ಪಡೆದು ನಂತರ ಕಾಲೇಜುವಾರು ಕ್ರೂಢೀಕೃತ ವಿದ್ಯಾರ್ಥಿಗಳ ಪಟ್ಟಿ, ಹಣ ಪಾವತಿಸಿರುವ ಮೂಲ ಚಲನ್ ಹಾಗೂ ಮುಚ್ಚಳಿಕೆ ಪತ್ರವನ್ನು ದಿನಾಂಕ 06.08.2022 ರಂದು ಕೇಂದ್ರ ಕಛೇರಿಗೆ ಸಲ್ಲಿಸಲು ಸೂಚಿಸಿದೆ.

01/08/2022

ನಿರ್ದೇಶಕರು (ಪರೀಕ್ಷೆ)
ಪದವಿ ಪೂರ್ವ ಶಿಕ್ಷಣ ಇಲಾಖೆ

ಪ್ರತಿಗಳು :

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳು, ಪದವಿ ಪೂರ್ವ ಶಿಕ್ಷಣ ಇಲಾಖೆ, ಉಪನಿರ್ದೇಶಕರುಗಳ ಮೂಲಕ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರು ಇವರಿಗೆ ಮಾಹಿತಿಗಾಗಿ.
2. ಸಹಾಯಕ ನಿರ್ದೇಶಕರು, ಇ-ಆಡಳಿತ ಶಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ ಇವರಿಗೆ ಅಂತರ್ಜಾಲದಲ್ಲಿ ಅಳವಡಿಸಲು.
3. ಹೆಚ್ಚುವರಿ / ಕಛೇರಿ ಪ್ರತಿ